ಈ ಧೋರಣೆಯನ್ನು ಪ್ರತಿಭಟಿಸಿ ನಾವೂ ಸಭಾತ್ಯಾಗ ಮಾಡುತ್ತೇವೆ. ಈ ಕಾಂಗ್ರೇಸ್ ಸರಕಾರವು ರೈತರ ಪರವಾಗಿ ಇಲ್ಲ. ಲಕ್ಷಾಂತರ ತೆಂಗಿನ ಮರಗಳು ಸತ್ತು ಹೋಗಿದ್ದರೂ ಅವುಗಳಿಗೆ ಪರಿಹಾರವನ್ನು ಕೊಡುವುದಕ್ಕೆ ಇವರಿಂದ ಆಗುತ್ತ ಇಲ್ಲ. ಇಂಥ ಸರಕಾರದ ಕ್ರಮವನ್ನು ನಾವು ಪ್ರತಿಭಟಿಸುತ್ತೇವೆ.

(ಬಿ.ಜೆ.ಪಿ. ಪಕ್ಷದ ಮಾನ್ಯ ಸದಸ್ಯರು ಸಭಾತ್ಯಾಗ ಮಾಡಿದರು)

(ಗೊಂದಲ)

ಶ್ರೀ ಬಿ. ಸೋಮಶೇಖರ್ :– ರೈತರ ಕಷ್ಟಗಳಿಗೆ ಪರಿಹಾರ ನೀಡದ ಈ ಸರಕಾರದ ಕ್ರಮವನ್ನು ಖಂಡಿಸಿ ನಾವು ಸಭತ್ಯಾಗ ಮಾಡುತ್ತೇವೆ.

(ಅಖಿಲ ಭಾರತ ಪ್ರಗತಿಪರ ಜನತಾ ದಳದ ಸದಸ್ಯರು ಸರಕಾರದ ನಿಲುವನ್ನು ಪ್ರತಿಭಟಿಸಿ ಸಭಾತ್ಯಾಗ ಮಾಡಿದರು ಹಾಗೂ ಸರಕಾರದ ನಿಲುವನ್ನು ಪ್ರತಿಭಟಿಸಿ ಜಾತ್ಯಾತೀತ ಜನತಾ ದಳದ ಮಾನ್ಯ ಸದಸ್ಯರು ಸಭಾತ್ಯಾಗ ಮಾಡಿದರು)

ಉಪಾಧ್ಯಕ್ಷರು :– ಈಗ ಸದನವನ್ನು ನಾಳೆ ಬೆಳಿಗ್ಗೆ 11–00 ಗಂಟೆವರೆಗೆ ಮುಂದೂಡುತ್ತಿದ್ದೇನೆ.

(ಸದನವು 7–32 ಗಂಟೆಗೆ ಮುಂದೂಡಲ್ಪಟ್ಟು ದಿನಾಂಕ 23–07–03 ರಂದು ಬೆಳಿಗ್ಗೆ 11–00 ಗಂಟೆಗೆ ಪುನಃ ಸಮಾವೇಶಗೊಳ್ಳಲು ನಿರ್ಧರಿಸಿತು)

ಅನುಬಂಧ – 1

ಜಮೀನಿನ ಹಕ್ಕು ಬದಲಾವಣೆಗೆ ಕಾಲಮಿತಿ ಬಗ್ಗೆ

418 (3811) : ಶ್ರೀ ವಿಶ್ವೇಶ್ವರ ಹೆಗಡೆ ಕಾಗೇರಿ (ಅಂಕೋಲ) ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಜಮೀನಿನ ಹಕ್ಕು ಬದಲಾವಣೆಯಾದ ನಂತರ ಮ್ಯುಟೇಷನ್‌ನಲ್ಲಿ ದಾಖಲಾಗಲು ನಿಗದಿಪಡಿಸಿರುವ ಕನಿಷ್ಠ ಕಾಲಮಿತಿ ಏನು;

ಆ) ಈ ಕಾಲಮಿತಿಯೊಳಗೆ ಮ್ಯುಟೇಷನ್‌ನಲ್ಲಿ ದಾಖಲಾಗದೆ ಅನಗತ್ಯ ವಿಳಂಬ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಹಾಗಿದ್ದಲ್ಲಿ, ಸರ್ಕಾರದ ಕ್ರಮವೇನು?

ಶ್ರೀ ಹೆಚ್.ಸಿ. ಶ್ರೀಕಂಠಯ್ಯ (ಕಂದಾಯ ಸಚಿವರು)

ಅ) ಕರ್ನಾಟಕ ಭೂ ಕಂದಾಯ ನಿಯಮಾವಳಿಗಳು 1966 ರ ನಿಯಮ 64 (2) ಹಾಗೂ 65 ರ ಮೇರೆಗೆ ನಮೂನೆ 12 ಹಾಗೂ 21ಎ ಕುರಿತಂತೆ ಆಕ್ಷೇಪಣಾದಾರರಿಂದ 30 ದಿನಗಳ ಅವಧಿಯೊಳಗೆ ಆಕ್ಷೇಪಣೆಗಳನ್ನು ಪಡೆದು, ಯಾವುದೇ ಆಕ್ಷೇಪಣೆಗಳು ಬಾರದಿದ್ದಲ್ಲಿ ಮ್ಯುಟೇಷನ್‌ನಲ್ಲಿ ದಾಖಲಿಸಬಹುದಾಗಿದೆ.

ಆ) ಇಲ್ಲ.

ಇ) ಪ್ರಶ್ನೆ (ಅ) ದ ಉತ್ತರದಿಂದ ಇದು ಉದ್ಭವಿಸುವುದಿಲ್ಲ.

ರಾಜ್ಯದಲ್ಲಿರುವ ಉದ್ಯೋಗ ವಿನಿಮಯ ಕೇಂದ್ರಗಳನ್ನು ರದ್ದುಗೊಳಿಸುವುದು

419 (4039) : ಶ್ರೀ ಕಟ್ಟಾ ಸುಬ್ರಮಣ್ಯ ನಾಯ್ಡು (ಶಿವಾಜಿನಗರ) ಮಾನ್ಯ ಕಾರ್ಮಿಕ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ರಾಜ್ಯದಲ್ಲಿರುವ ಉದ್ಯೋಗ ವಿನಿಮಯ ಕೇಂದ್ರಗಳ ಸಂಖ್ಯೆಎಷ್ಟು;